ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು– 560001

ಸಂಖ್ಯೆ:ಸಿ7[2] ಪ್ರಾಶಿಅ/ಸ.ಸಾ.ವಾ/ಶಾ.ಮ.ಸಾ–72/2019–20 ದಿನಾಂಕ: 16–08–2019

**: : ಸುತ್ತೋಲೆ : :**

ವಿಷಯ : ಸರಕು ಸಾಗಾಣೆ ವಾಹನಗಳಲ್ಲಿ ಕೂಲಿ ಕಾರ್ಮಿಕರು / ಶಾಲಾ ಮಕ್ಕಳು ಹಾಗೂ ಇನ್ನಿತರೆ ಪ್ರಯಾಣಿಕರನ್ನು ಕಾನೂನು ಬಾಹಿರವಾಗಿ ಸಾಗಿಸುತ್ತಿರುವ ಬಗ್ಗೆ.

ಉಲ್ಲೇಖ: 1. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಘನ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳು / ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ–ಗಳು ಮತ್ತು ಇತರೆ ಜಿಲ್ಲಾ ಮಟ್ಟದ ಸಂಬಂಧಿಸಿದ ಅಧಿಕಾರಿಗಳೊಂದಿಗೆ ದಿನಾಂಕ:30.04.2019 ರಂದು ನಡೆದ ವಿಡಿಯೋ ಸಂವಾದ.

2. ಮಾನ್ಯ ಉಚ್ಚ ನ್ಯಾಯಾಲಯದ ದಾವೆ ಸಂಖ್ಯೆ: 12181 /2019 (ಜಿಎಂ–ಆರ್‌ಇಎಸ್)

3. ಸರ್ಕಾರದ ಪತ್ರದ ಸಂಖ್ಯೆ: ಇಡಿ 120 ಪಿಜಿಸಿ 2019, ದಿನಾಂಕ:12–06–2019.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯದಲ್ಲಿ ಸರಕು ಸಾಗಾಣೆ ವಾಹನಗಳಲ್ಲಿ ಶಾಲಾ ಮಕ್ಕಳು / ಕೂಲಿ ಕಾರ್ಮಿಕರು ಇನ್ನಿತರೆ ಪ್ರಯಾಣಿಕರನ್ನು ಮೋಟಾರು ವಾಹನ ಕಾಯ್ದೆ / ನಿಯಮಗಳನ್ನು ಉಲ್ಲಂಘಿಸಿ ಸುರಕ್ಷಿತವಲ್ಲದ ರೀತಿಯಲ್ಲಿ ಕಾರ್ಯಾಚರಣೆ ಮಾಡುತ್ತಿರುವ ಬಗ್ಗೆ ಆರೋಪಿಸಿ ಉಲ್ಲೇಖ (2) ರಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 12181/2019 ಅನ್ನು ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರದಿಂದ ದಾಖಲಿಸಲಾಗಿದ್ದು, ಇಂತಹ ಪ್ರಕರಣಗಳನ್ನು ತಡೆಗಟ್ಟಲು ಪರಿಣಾಮಕಾರಿಯಾದ ಕ್ರಿಯಾ ಯೋಜನೆಯನ್ನು ರೂಪಿಸಬೇಕಾಗಿದ್ದು, ಈ ಬಗ್ಗೆ ಪೋಲೀಸ್, ಕಾರ್ಮಿಕ ಇಲಾಖೆ ಮತ್ತು ಶಿಕ್ಷಣ ಇಲಾಖೆಗಳು ಪಾಲುದಾರಿಕೆ ಇಲಾಖೆಗಳಾಗಿದ್ದು, ಈ ನಿಟ್ಟಿನಲ್ಲಿ ತಕ್ಷಣವೇ ಕಾರ್ಯಾಚರಣೆಯನ್ನು ಹಾಗೂ ಇಂತಹ ಅಪಾಯಕಾರಿ ಹಾಗೂ ಅಸುರಕ್ಷಿತವಾದ ಜನರ ಪ್ರಾಯಾಣವನ್ನು ತಕ್ಷಣವೇ ತಡೆಗಟ್ಟಲು ತುರ್ತಾದ ಕ್ರಮ ವಹಿಸಬೇಕೆಂದು ಹಾಗೂ ತತ್ಸಂಬಂಧವಾದ ಅಪಘಾತಕ್ಕೆ ಈಡಾಗುವ ಪ್ರಕರಣಗಳು ಹೆಚ್ಚಾಗಿರುವುದನ್ನು ಗಮನಿಸಿದ್ದು ಇಂತಹ ಪ್ರಕರಣಗಳನ್ನು ತಡೆಗಟ್ಟಲು ಜಿಲ್ಲಾ ಮಟ್ಟದಲ್ಲಿ ರಚಿಸಲಾಗಿರುವ ರಸ್ತೆ ಸುರಕ್ಷತಾ ಪ್ರಾಧಿಕಾರದ ಕೆಲಸ ಕಾರ್ಯಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸಲು ಹಾಗೂ ಈವರೆಗೂ ಇದಕ್ಕೆ ಸಂಬಂಧಿಸಿದಂತೆ ಯಾವುದೇ ವರದಿಯನ್ನು ಸಹ ನೀಡದಿರುವುದು ಗಂಭೀರವಾದ ವಿಷಯವಾಗಿದೆಯೆಂದು ಎಲ್ಲಾ ಜಿಲ್ಲಾಧಿಕಾರಿಗಳಿಗೆ / ಪೋಲೀಸ್ ವರಿಷ್ಠಾಧಿಕಾರಿಗಳಿಗೆ ಉಲ್ಲೇಖ (1)ರ ಸಭೆಯಲ್ಲಿ ತಿಳಿಸಲಾಗಿದೆ.

ಆದುದರಿಂದ ಸರ್ಕಾರಿ / ಅನುದಾನಿತ / ಅನುದಾನರಹಿತ ಶಾಲೆಗಳಲ್ಲಿ ಒಂದು ಊರಿನಿಂದ ಇನ್ನೊಂದು ಊರಿನಲ್ಲಿರುವ ಶಾಲೆಗೆ ಮಕ್ಕಳು ವ್ಯಾಸಂಗ ಮಾಡುವುದಕ್ಕೆ, ಕ್ರೀಡಾಕೂಟಗಳಿಗೆ, ಸಭೆ ಸಮಾರಂಭಗಳಿಗೆ ಸರಕು ಸಾಗಾಣಿಕೆ ವಾಹನಗಳಲ್ಲಿ ಕರೆದು ಕೊಂಡು ಹೋಗುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ.

ಈ ಕುರಿತು ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಘನ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳು / ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು ಮತ್ತು ಇತರೆ ಜಿಲ್ಲಾ ಮಟ್ಟದ ಸಂಬಂಧಿಸಿದ ಅಧಿಕಾರಿಗಳೊಂದಿಗೆ ದಿನಾಂಕ:30.04.2019 ರಂದು ನಡೆದ ವಿಡಿಯೋ ಸಂವಾದದಲ್ಲಿ ಸೂಚಿಸಿರುವಂತೆ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.

- ಶಾಲೆಗಳಿಗೆ ದೂರದಿಂದ ಬರುವ ಮಕ್ಕಳಿಗೆ ಕಡ್ಡಾಯವಾಗಿ ವಾಹನ ಸೌಲಭ್ಯವನ್ನು ಶಾಲಾ ಆಡಳಿತ ಮಂಡಳಿಯೇ ಒದಗಿಸುವುದು.
- ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯಿಂದ ಶಾಲಾ ಮಕ್ಕಳಿಗೆ ರಿಯಾಯಿತಿ ದರದಲ್ಲಿ ಬಸ್ ಪಾಸ್ ವಿತರಿಸಲಾಗುತ್ತಿದ್ದು ಈ ಸೌಲಭ್ಯ ಪಡೆಯುವಂತೆ ವಿದ್ಯಾರ್ಥಿಗಳ ಪೋಷಕರಿಗೆ ಸೂಚಿಸುವುದು.
- ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಶಾಲಾ ಮಕ್ಕಳ ಸಾಗಾಣಿಕೆಗಾಗಿಯೇ ವಿಶೇಷ ರಿಯಾಯಿತಿ ದರದಲ್ಲಿ ಶಾಲೆಗಳಿಗೆ ಒಪ್ಪಂದದ ಮೇರೆಗೆ ಬಸ್ ಒದಗಿಸುತ್ತಿದ್ದು, ಆರ್ಥಿಕವಾಗಿ ಸ್ವಂತ ವಾಹನ ಹೊಂದಲು ಸಾಧ್ಯವಿಲ್ಲದ ಶಾಲೆಯವರು ಈ ಸೌಲಭ್ಯ ಪಡೆಯುವುದು.
- ಯಾವುದೇ ಕಾರಣಕ್ಕೂ ಸಕ್ಷಮ ಪ್ರಾಧಿಕಾರ ಅನುಮತಿ ನೀಡದ ವಾಹನಗಳಲ್ಲಿ ಶಾಲಾ ಮಕ್ಕಳನ್ನು ಕರೆತರೆದಂತೆ ಶಾಲಾ ಆಡಳಿತ ಮಂಡಳಿಯು ಪೋಷಕರಿಗೆ ಸಭೆಗಳನ್ನು ಕರೆದು ತಿಳಿಸುವುದು ಹಾಗೂ ಈ ಬಗ್ಗೆ ವ್ಯಾಪಕ ಪ್ರಚಾರ ಮಾಡುವುದು.
- ತಪ್ಪಿದಲ್ಲಿ ಇಂತಹ ವಾಹನಗಳು ಮುಂದೆ ಯಾವುದೇ ಅವಗಢಗಳಿಗೆ ತುತ್ತಾದಲ್ಲಿ ಮಗು ಓದುತ್ತಿರುವ ಶಾಲಾ ಆಡಳಿತ ಮಂಡಳಿ ಮೇಲೆ ನಿಯಮಾನುಸಾರ ಕಾನೂನು ರೀತಿಯ ಕ್ರಮ ಜರುಗಿಸಲಾಗುವುದು.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಶಾಲಾ ಆಡಳಿತ ಮಂಡಳಿ / ಮುಖ್ಯಸ್ಥರಿಗೆ ಶಾಲಾ ಮಕ್ಕಳ ಸುರಕ್ಷತೆ ಹಿತದೃಷ್ಟಿಯಿಂದ ಶಾಲೆಗಳಲ್ಲಿ ಸರಕು ಸಾಗಾಣೆ ವಾಹನಗಳಲ್ಲಿ ಶಾಲಾ ಮಕ್ಕಳನ್ನು ಮೋಟಾರು ವಾಹನ ಕಾಯ್ದೆ / ನಿಯಮಗಳನ್ನು ಉಲ್ಲಂಘಿಸಿ ಸುರಕ್ಷಿತವಲ್ಲದ ರೀತಿಯಲ್ಲಿ ಕಾರ್ಯಾಚರಣೆ ಮಾಡುತ್ತಿರುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಉಲ್ಲೇಖ (1) ರಂತೆ ನೀಡಿರುವ ಸೂಚನೆಗಳನ್ನು / ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ. ಈ ಅಂಶಗಳನ್ನು ಸರ್ಕಾರಿ / ಅನುದಾನಿತ / ಅನುದಾನರಹಿತ ಶಾಲೆಗಳು ಸಹಾ ಕಡ್ಡಾಯವಾಗಿ ಪಾಲಿಸುವುದು.

ಈ ಬಗ್ಗೆ ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಮತ್ತು ರಾಜ್ಯದ ಎಲ್ಲಾ ತಾಲ್ಲೂಕು / ವಲಯಗಳ ಕ್ಷೇತ್ರಶಿಕ್ಷಣಾಧಿಕಾರಿಗಳು ನಿಮ್ಮ ಆಡಳಿತ ವ್ಯಾಪ್ತಿಯ ಎಲ್ಲಾ ಶೈಕ್ಷಣಿಕ ಸಂಸ್ಥೆಯವರು ಸರಕು ಸಾಗಾಣೆ ವಾಹನಗಳಲ್ಲಿ ಶಾಲಾ ಮಕ್ಕಳನ್ನು ಮೋಟಾರು ವಾಹನ ಕಾಯ್ದೆ / ನಿಯಮಗಳನ್ನು ಉಲ್ಲಂಘಿಸಿ ಸುರಕ್ಷಿತವಲ್ಲದ ರೀತಿಯಲ್ಲಿ ಕಾರ್ಯಾಚರಣೆ ಮಾಡುತ್ತಿರುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಕ್ರಮ ತೆಗೆದುಕೊಳ್ಳಲು ಕ್ರಮವಹಿಸದಿದ್ದಲ್ಲಿ ಅಂತಹ ಶಾಲೆಗಳ ವಿರುದ್ದ ಜಿಲ್ಲಾ ಶಿಕ್ಷಣ ನಿಯಂತ್ರಣಾ ಪ್ರಾಧಿಕಾರದಲ್ಲಿ ದೂರನ್ನು ದಾಖಲಿಸಿ, ಜಿಲ್ಲಾ ಶಿಕ್ಷಣ ನಿಯಂತ್ರಣಾ ಪ್ರಾಧಿಕಾರ ನೀಡುವ ಆದೇಶದಂತೆ ಸೂಕ್ತ ಕ್ರಮ ಜರುಗಿಸಲು ಸೂಚಿಸಲಾಗಿದೆ.

[ಡಾ॥ ಕೆ.ಜಿ.ಜಗದೀಶ, ಭಾ.ಆ.ಸೇ]
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ.

17/8

ಗೆ,
**ರಾಜ್ಯದ ಎಲ್ಲಾ ಶಾಲಾ ಮುಖ್ಯಸ್ಥರುಗಳಿಗೆ,**
[ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ]

ಪ್ರತಿಯನ್ನು:

1. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಅಧ್ಯಕ್ಷರು ಜಿಲ್ಲಾ ಶಿಕ್ಷಣ ನಿಯಂತ್ರಣಾ ಪ್ರಾಧಿಕಾರ ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸುತ್ತಾ ಇಂತಹ ದೂರುಗಳ ಬಗ್ಗೆ ವಿಳಂಬಕ್ಕೆ ಅವಕಾಶ ನೀಡದಂತೆ ಶೀಘ್ರವಾಗಿ ಕ್ರಮವಹಿಸಲು ಕೋರಿದೆ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ವಿಭಾಗ ಇವರಿಗೆ ಮಾಹಿತಿಗಾಗಿ
3. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಕಳುಹಿಸುತ್ತಾ ಸದರಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಎಲ್ಲಾ ಶಾಲಾ ಮುಖ್ಯಸ್ಥರುಗಳಿಗೆ ಸೂಕ್ತ ನಿರ್ದೇಶನ ನೀಡಲು ಪಾಲಿಸಲು ಅಗತ್ಯ ಕ್ರಮವಹಿಸಲು ಸೂಚಿಸಿದೆ.
4. ರಾಜ್ಯದ ಎಲ್ಲಾ ತಾಲ್ಲೂಕು / ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಕಳುಹಿಸುತ್ತಾ ನಿಮ್ಮ ಆಡಳಿತ ವ್ಯಾಪ್ತಿಯ ಎಲ್ಲಾ ಶಾಲಾ ಮುಖ್ಯಸ್ಥರುಗಳಿಗೆ ಸದರಿ ಸುತ್ತೋಲೆಯನ್ನು ಕಳುಹಿಸಿ ಸುತ್ತೋಲೆಯಲ್ಲಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಕ್ತ ಕ್ರಮವಹಿಸಲು ಸೂಚಿಸಿದೆ.
5. ಆಯುಕ್ತರ ಕಛೇರಿ, ಇ–ಆಡಳಿತ ವಿಭಾಗ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ

**ಪ್ರತಿಯನ್ನು ಗೌರವ ಪೂರ್ವಕವಾಗಿ,**

6. ಮಾನ್ಯ ಸರ್ಕಾರದ ಮುಖ್ಯಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ.
7. ಮಾನ್ಯ ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಗೃಹ ಇಲಾಖೆ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ.
8. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಾರಿಗೆ ಇಲಾಖೆ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ.
9. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, ಕಾರ್ಮಿಕ ಭವನ, ಬನ್ನೆರುಘಟ್ಟ ರಸ್ತೆ, ಐ.ಟಿ.ಐ ಕಾಂಪೌಂಡ್, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ.
10. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ( ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ), ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ.
11. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಸಾರಿಗೆ ಆಯುಕ್ತರ ಕಛೇರಿ, 1ನೇ ಮಹಡಿ, ಟಿ.ಟಿ.ಎಂ.ಸಿ ಕಟ್ಟಡ, ಕೆ.ಎಚ್.ರಸ್ತೆ, ಶಾಂತಿನಗರ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ,
12. ಮಾನ್ಯ ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೋಲೀಸ್, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ
13. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ನರಸಿಂಹರಾಜ ಚೌಕ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ.
14. ಕಛೇರಿ ಪ್ರತಿ.